## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಧುಗಿರಿ ತಾಲ್ಲೂಕು ಪಂಚಾಯತಿಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಹೆಚ್.ಡಿ.ಮಹಾಲಿಂಗಯ್ಯ ಮತ್ತು ಶ್ರೀ ಟಿ.ಎಲ್.ಲೋಕೇಶ ಇವರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಮಂಡನಾಧಿಕಾರಿಗಳ ಬದಲಾವಣೆ ಮಾಡುವ ಬಗ್ಗೆ.

ಓದಲಾಗಿದೆ:1) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/149/ವಿಸೇಬಿ/2014ದಿನಾಂಕ: 21-04-2016.

2. ಶ್ರೀ ಅರುಣ ಘುರ್ಟಾಡೋ, ಅಧೀನ ಕಾರ್ಯದರ್ಶಿ (ಆಡಳಿತ) ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿ ಮುಖ್ಯ ಮಂತ್ರಿ ಸಚಿವಾಲಯ ರವರ ಪತ್ರ ದಿನಾಂಕ: 30-06-2016.

------

ಪ್ರಸ್ತಾವನೆ:

2011-12ನೇ ಸಾಲಿನಲ್ಲಿ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ಮಧುಗಿರಿ ಇಲ್ಲಿ ಬಿಡುಗಡೆಯಾದ ಅನುದಾನಕ್ಕಿಂದ ಹೆಚ್ಚುವರಿಯಾಗಿ ತಾಲ್ಲೂಕು ಪಂಚಾಯತ್ ಲೆಕ್ಕ ಶಿರ್ಷಿಕೆಯಡಿ ನಿಯಮಬಾಹಿರವಾಗಿ ಡ್ರಾ ಮಾಡಿ ದುರುಪಯೋಗಪಡಿಸಿಕೊಂಡಿರುವ ಎನ್ನಲಾದ ಪ್ರಕರಣದಲ್ಲಿ ಭಾಗಿಯಾಗಿರುವ ಮಧುಗಿರಿ ತಾಲ್ಲೂಕು ಪಂಚಾಯತಿಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಹೆಚ್.ಡಿ.ಮಹಾಲಿಂಗಯ್ಯ ಮತ್ತು ಶ್ರೀ ಟಿ.ಎಲ್.ಲೋಕೇಶ್ ಇವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆ ಜರುಗಿಸಲು, ಸರ್ಕಾರವು ಶ್ರೀ ಅರುಣ ಘುರ್ಟಾಡೋ, ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಶ್ರೀ ಅರುಣ ಘುರ್ಟಾಡೋ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಪತ್ರದಲ್ಲಿ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಹುದ್ದೆಯಿಂದ ಅಧೀನ ಕಾರ್ಯದರ್ಶಿ (ಆಡಳಿತ) ಮುಖ್ಯ ಮಂತ್ರಿಯವರ ಸಚಿವಾಲಯ, ವಿಧಾನಸೌಧ ಹುದ್ದೆಗೆ ವರ್ಗಾಯಿಸಿರುವುದರಿಂದ ಅವರ ಬದಲಿಗೆ ಬೇರೊಬ್ಬ ಅಧಿಕಾರಿಯನ್ನು ಮಂಡನಾಧಿಕಾರಿಯನ್ನಾಗಿ ನೇಮಿಸುವಂತೆ ಕೋರಿರುತ್ತಾರೆ. ಆದುದರಿಂದ ಶ್ರೀ ನಾಗೇಶ, ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 149 ವಿಸೇಬಿ 2014 ಬೆಂಗಳೂರು ದಿನಾಂಕ:06-08-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮಧುಗಿರಿ ತಾಲ್ಲೂಕು ಪಂಚಾಯತಿಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಹೆಚ್.ಡಿ.ಮಹಾಲಿಂಗಯ್ಯ ಮತ್ತು ಶ್ರೀ ಟಿ.ಎಲ್.ಲೋಕೇಶ್ ಇವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆ ಪ್ರಕರಣದಲ್ಲಿ, ವಿಚಾರಣಾಧಿಕಾರಿಗಳ ಮುಂದೆ ಪ್ರಕರಣವನ್ನು ಮಂಡಿಸಲು ಹಿಂದೆ ನೇಮಿಸಿದ ಶ್ರೀ ಅರುಣ ಘುರ್ಟಾಡೋ, ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರ ಬದಲಾಗಿ ಶ್ರೀ ನಾಗೇಶ, ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರನ್ನು ಮಂಡನಾಧಿಕಾರಿಯಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

6/8/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಜಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್‌ಎಸ್ಎ) ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂ-5398, ಬೆಂಗಳೂರು-560001.

GO

2. ಪ್ರಧಾನ ಮಹಾಲೇಖಪಾಲರು(ಇ&ಎಸ್ಎಸ್ಎ) ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ) ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ/ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಶ್ರೀ: ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಮನೆ ನಂ.746, 15ನೇ ಕ್ರಾಸ್, ಮೇನ್ ಜುಡಿಷಿಯಲ್ ಲೇಔಟ್, ಅಲ್ಲಾಳ ಸಂದ್ರ, ಜಿಕೆವಿಕೆ ಅಂಚೆ, ಬೆಂಗಳೂರು-65.
7. ಶ್ರೀ ನಾಗೇಶ, ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಶ್ರೀ ಅರುಣ್ ಫುರ್ಟಾಡೋ, ಅಧೀನ ಕಾರ್ಯದರ್ಶಿ (ಆಡಳಿತ) ಮುಖ್ಯ ಮಂತ್ರಿಯವರ ಸಚಿವಾಲಯ, ವಿಧಾನಸೌಧ, ಬಎಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ/ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ.
11. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ರವರ ಮುಖಾಂತರ).

ಪ್ರತಿಯನ್ನು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.